2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ**. 590/2021**

ಹೆಸರುಃ ಅಶೋಕ ಚಾಸಾಃ 5

ತಂದೆಯ ಹೆಸರುಃ ಶಿವಮೂರ್ತಿ ಪ್ರಾಸಾ: 5

ವಯಸ್ಸುಃ 34 ವರ್ಷ

ಉದ್ಯೋಗಃ ಕಿರಾಣಿ ಅಂಗಡಿ ಕೆಲಸ

ವಾಸ ಸ್ಥಳಃ ತಣಿಗೆರೆ ಗ್ರಾಮ, ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 31-01-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಅರೋಪಿತರು ತೋರಿಸಿದ ಕೃತ್ಯ ನಡೆದ ಸ್ದಳದ ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು. ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಸುಮಾರು 2-3 ವರ್ಷಗಳ ಹಿಂದೆ ಚಾಸಾ-1ರವರ ಮನೆಯಲ್ಲಿ ಆದ ಕಳ್ಳತನದ ವಿಚಾರವಾಗಿ ಪೊಲೀಸರು ಮಹಜರಿಗೆ ಬಂದಾಗ ಸುಮಾರು 10.30 ಗಂಟೆ ಸಮಯದಲ್ಲಿ ಮಾಡಿರುತ್ತೇನೆ. ನನ್ನ ಜೊತೆ ಸದರಿ ದಿನದಂದು ಚಾಸಾ-4 ರವರು ಹಾಜರಿದ್ದರು.

ಈಗ ನೋಡುತ್ತಿರುವ ಪೊಟೋದಲ್ಲಿ ನಾನು ಇದ್ದೇನೆ. ಸದರಿ ಪೊಟೋವನ್ನು ನಿಪಿ-2 ರ ಸಮಯದಲ್ಲಿ ತೆಗೆಯಲಾಗಿದ್ದು ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದೆ.

**(ಈ ಹಂತದಲ್ಲಿ ಸಾಕ್ಷಿಯು ಮಹಜರಿಗೆ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಮಹಜರನ್ನು ನೋಡಲಾಗಿ ಸಾಕ್ಷಿಯು ಮಹಜರಿಗೆ ಭಾಗಶಃ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**<u>ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ</u>**

ದಿಃ 26-08-2020ರಂದು ನನಗೆ ಮತ್ತು ಚಾಸಾ-4 ರವರಿಗೆ ಚಾಸಾ-1 ರಮರ ನೀಡಿದ ದೂರಿನ ಹಿನ್ನೆಲೆಯಲ್ಲಿ ಮಹಜರಿಗೆ ಸಹಕರಿಸಲು ಪೊಲೀಸರು ಕೋರಿದರು ಎಂದರೆ ಸರಿ. ನನ್ನ ಸಮಕ್ಷಮ ಬೆಳಿಗ್ಗೆ 9.00 ರಿಂದ 9.45ರವರೆಗೆ ಸ್ಥಳ ಪಂಚನಾಮೆಯನ್ನು ಜರುಗಿಸಿದ್ದರು ಎಂದರೆ ಸರಿ.

**(ಪಾಟೀ ಸವಾಲು - ಆರೋಪಿ ಪರ ವಕೀಲರು ಗೈರು ಹಾಜರಾಗಿದ್ದು ಆರೋಪಿಯನ್ನು ವಾಟ್ಸಾಫ್ ಮೂಲಕ ಹಾಸನಕಾರಾಗೃಹದಿಂದ ಹಾಜರುಪಡಿಸಿದ್ದು, ಸದರಿ ವಿಚಾರವನ್ನು ಆರೋಪಿಗೆ ತಿಳಿಸಿದಾಗ ಸದರಿ ಆರೋಪಿ ತಾಲ್ಲೂಕು ಕಾನೂನು ಸೇವಾ ಸಮಿತಿಯಿಂದ ವಕೀಲರನ್ನು ನೇಮಿಸಲು ಮೌಖಿಕವಾಗಿ ನ್ಯಾಯಾಲಯಕ್ಕೆ ಕೋರಿರುತ್ತಾರೆ. ಆದ ಕಾರಣ ಪಾಟೀ ಸವಾಲಿಗೆ ಸಮಯಾವಕಾಶ ನೀಡಲಾಯಿತು. )**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**02ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ, ಚನ್ನಗಿರಿ.**

2ನೇ ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ**. 590/2021**

ಹೆಸರುಃ ಜಿ ಕೆ ಮರುಳಸಿದ್ದಪ್ಪ                                        ಚಾಸಾಃ 4

ತಂದೆಯ  ಹೆಸರುಃ  ಕರಿಯಪ್ಪ                                        ಪ್ರಾಸಾ: 4

ವಯಸ್ಸುಃ 52 ವರ್ಷ

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ  ತಣಿಗೆರೆ ಗ್ರಾಮ, ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 31-01-2025  ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ.   ಸದರಿ ದಾಖಲೆ ಅರೋಪಿತರು ತೋರಿಸಿದ  ಕೃತ್ಯ ನಡೆದ ಸ್ಥಳದ ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ  ನಿಪಿ-2 ಎಂದು ಗುರುತಿಸಲಾಗಿದ್ದು. ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 2020ರಂದು ಚಾಸಾ-1ರವರ ಮನೆಯಲ್ಲಿ ಆದ ಕಳ್ಳತನದ ವಿಚಾರವಾಗಿ ಪೊಲೀಸರು ಮಹಜರಿಗೆ ಬಂದಾಗ ಸುಮಾರು 10.30 ಗಂಟೆ ಸಮಯದಲ್ಲಿ ಮಾಡಿರುತ್ತೇನೆ. ನನ್ನ  ಜೊತೆ ಸದರಿ ದಿನದಂದು ಚಾಸಾ-5 ರವರು ಹಾಜರಿದ್ದರು.

ಈಗ ನೋಡುತ್ತಿರುವ ಪೊಟೋದಲ್ಲಿ ನಾನು ಇದ್ದೇನೆ. ಸದರಿ ಪೊಟೋವನ್ನು ನಿಪಿ-2 ರ ಸಮಯದಲ್ಲಿ ತೆಗೆಯಲಾಗಿದ್ದು ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು

**(ಈ ಹಂತದಲ್ಲಿ ಸಾಕ್ಷಿಯು ಮಹಜರಿಗೆ  ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು  ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಮಹಜರನ್ನು ನೋಡಲಾಗಿ ಸಾಕ್ಷಿಯು  ಮಹಜರಿಗೆ  ಭಾಗಶಃ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ  ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು  ಅನುಮತಿ ನೀಡಲಾಯಿತು.)**

**<u>ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ</u>**

ದಿಃ 26-08-2020ರಂದು ನನ್ನ ಸಮಕ್ಷಮ ಬೆಳಿಗ್ಗೆ 9.00 ರಿಂದ 9.45ರವರೆಗೆ ಸ್ಥಳ ಪಂಚನಾಮೆಯನ್ನು ಜರುಗಿಸಿದ್ದರು ಎಂದರೆ ಸರಿ.

**(ಪಾಟೀ ಸವಾಲು - ಆರೋಪಿ ಪರ ವಕೀಲರು ಗೈರು ಹಾಜರಾಗಿದ್ದು ಆರೋಪಿಯನ್ನು ವಾಟ್ಸಾಫ್ ಮೂಲಕ ಹಾಸನಕಾರಾಗೃಹದಿಂದ ಹಾಜರುಪಡಿಸಿದ್ದು, ಸದರಿ ವಿಚಾರವನ್ನು ಆರೋಪಿಗೆ ತಿಳಿಸಿದಾಗ ಸದರಿ ಆರೋಪಿ ತಾಲ್ಲೂಕು ಕಾನೂನು ಸೇವಾ ಸಮಿತಿಯಿಂದ ವಕೀಲರನ್ನು ನೇಮಿಸಲು ಮೌಖಿಕವಾಗಿ ನ್ಯಾಯಾಲಯಕ್ಕೆ ಕೋರಿರುತ್ತಾರೆ. ಆದ ಕಾರಣ ಪಾಟೀ ಸವಾಲಿಗೆ ಸಮಯಾವಕಾಶ ನೀಡಲಾಯಿತು. )**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**02ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ, ಚನ್ನಗಿರಿ.**